**ಕರ್ನಾಟಕ ವಿಧಾನ ಪರಿಷತ್**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 120

ಸದಸ್ಯರ ಹೆಸರು : **ಶ್ರೀ ರಿಜ್ವಾನ್ ಅರ್ಷದ್**
**(ವಿಧಾನ ಸಭೆಯಿಂದ ಚುನಾಯಿತರಾದವರು)**

ಉತ್ತರಿಸುವ ದಿನಾಂಕ : 10/07/2018.

ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ಟ್ರಾಫಿಕ್ ಜಾಮ್ ಸಮಸ್ಯೆ ದಿನದಿನಕ್ಕೂ ಹೆಚ್ಚಾಗುತ್ತಿದ್ದು, ಸುಗಮ ಸಂಚಾರಕ್ಕಾಗಿ ಹಮ್ಮಿಕೊಂಡಿರುವ ಮಾರ್ಗೋಪಾಯಗಳು ಯಾವುವು; (ವಿವರ ನೀಡುವುದು) | ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ. |
| ಆ) | ಬೆಂಗಳೂರು ಟ್ರಾಫಿಕ್ ಸಮಸ್ಯೆ ಸುಗಮ ಸಂಚಾರ ಮತ್ತು ಕಳ್ಳತನ ತಡೆಯಲು ಎಲ್ಲಾ ರಸ್ತೆಗಳಿಗೂ ಸಿಸಿಟಿವಿ ಅಳವಡಿಕೆ ಮಾಡುವ ಬಗ್ಗೆ ಸರ್ಕಾರದ ನಿರ್ಧಾರವೇನು; (ವಿವರ ನೀಡುವುದು) | ಬೆಂಗಳೂರು ಸಂಚಾರ ಸಮಸ್ಯೆ ಹಾಗೂ ಸುಗಮ ಸಂಚಾರದ ದೃಷ್ಟಿಯಿಂದ 829 ಜಂಕ್ಷನ್ ಮತ್ತು ರಸ್ತೆಗಳಲ್ಲಿ ಸಿ.ಸಿ.ಟಿ.ವಿ. ಕ್ಯಾಮೆರಾ ಹಾಗೂ ಸರ್ವೇಲೆನ್ಸ್ ಕ್ಯಾಮೆರಾಗಳನ್ನು ಹಾಗೂ ಕಳ್ಳತನ ತಡೆಯಲು ಕಾನೂನು ಮತ್ತು ಸುವ್ಯವಸ್ಥೆಯ ವಿಭಾಗದಿಂದ ಒಟ್ಟು 152 ಕ್ಯಾಮೆರಾಗಳನ್ನು ಅಳವಡಿಸಲಾಗಿರುತ್ತದೆ. ಅನುದಾನದ ಲಭ್ಯತೆಯ ಆಧಾರದ ಮೇಲೆ ಉಳಿದ ರಸ್ತೆಗಳಲ್ಲಿ ಹಂತ ಹಂತವಾಗಿ ಸಿಸಿಟಿವಿ ಅಳವಡಿಸುವ ಉದ್ದೇಶವಿದೆ. |
| ಇ) | ಟ್ರಾಫಿಕ್ ನಿಗಾ ಸಮಿತಿ ರಚಿಸಲಾಗಿದೆಯೇ; ರಚಿಸಿದ್ದಲ್ಲಿ, ಸದರಿ ಸಮಿತಿಯ ವಿವರ ನೀಡುವುದು; ಮತ್ತು ಸಮಿತಿಯ ಕಾರ್ಯ ಮತ್ತು ಜವಬ್ದಾರಿಗಳೇನು; ರಚಿಸದಿದ್ದಲ್ಲಿ, ತಕ್ಷಣ ರಚಿಸಲು ಕ್ರಮಕೈಗೊಳ್ಳುವುದೇ? (ವಿವರ ನೀಡುವುದು) | ಬೆಂಗಳೂರು ನಗರದ ಸಂಚಾರ ಸಮಸ್ಯೆಗಳನ್ನು ನಿಭಾಯಿಸಲು ಮಾನ್ಯ ಮುಖ್ಯಮಂತ್ರಿಯವರು ಹಾಗೂ ಮಾನ್ಯ ಬೆಂಗಳೂರು ಅಭಿವೃದ್ಧಿ ಸಚಿವರ ಅಧ್ಯಕ್ಷತೆ, ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ಉಪಾಧ್ಯಕ್ಷರಾಗಿರುವ ವಿವಿಧ ಇಲಾಖೆ / ಸಂಸ್ಥೆಗಳ ಸದಸ್ಯರನ್ನೊಳಗೊಂಡ **ಬಿ.ಟಿ.ಟಿ.ಎಫ್ (ಬೆಂಗಳೂರು ಸಂಚಾರ ಕಾರ್ಯಪಡೆ)ಯನ್ನು** ರಚಿಸಲಾಗಿದ್ದು, ಸಂಚಾರ ಸಮಸ್ಯೆಗಳು ಹಾಗೂ ಸಂಚಾರ ವ್ಯವಸ್ಥೆಯ ಸುಧಾರಣೆಯ ಬಗ್ಗೆ ನಿಗಾವಹಿಸಲಾಗಿರುತ್ತದೆ. ಕಾರ್ಯಪಡೆಯು ಸಂಚಾರ ದಟ್ಟಣೆಯಲ್ಲಿ ಕೈಗೊಂಡಿರುವ ಕ್ರಮಗಳ ಪರಾಮರ್ಶೆ ಹಾಗೂ ನಿಯಂತ್ರಣಕ್ಕೆ ಮಾರ್ಗೋಪಾಯಗಳನ್ನು ನಿರ್ಧರಿಸಲಾಗುತ್ತಿದೆ. |

ಹೆಚ್‌ಡಿ 382 ಎಸ್‌ಎಸ್‌ಟಿ 2018

(ಡಾ.ಜಿ.ಪರಮೇಶ್ವರ)
ಗೃಹ ಸಚಿವರು.

## ಅನುಬಂಧ

- ಬೆಂಗಳೂರು ನಗರದಲ್ಲಿ ಇರುವ ರಸ್ತೆಗಳ ಮಿತಿಗಿಂತ ಹೆಚ್ಚು ವಾಹನಗಳು ಸಂಚರಿಸುತ್ತಿದ್ದು ವಾಹನ ದಟ್ಟಣೆಗೆ ಪ್ರಮುಖ ಕಾರಣವಾಗಿದ್ದು, ಇದನ್ನು ಸುಗಮಗೊಳಿಸಲು ಕೆಲವು ಪ್ರಮುಖ ರಸ್ತೆಗಳಲ್ಲಿ ಸಿಗ್ನಲ್ ಫ್ರೀ ಕಾರಿಡಾರ್‌ಗಳನ್ನು ಮಾಡಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆ.

- ಸಂಚಾರ ದಟ್ಟಣೆ/ ಸಮಸ್ಯೆಗಳು ಕಂಡುಬರುತ್ತಿರುವ ಸ್ಥಳಗಳಲ್ಲಿ ಪರಿವೀಕ್ಷಣೆ ನಡೆಸಿ ಸುಗಮ ಸಂಚಾರದ ಹಿತದೃಷ್ಟಿಯಿಂದ ನಗರದ ಹಲವಾರು ಸ್ಥಳಗಳಲ್ಲಿ ಬಲ ತಿರುವು ಹಾಗೂ ಯು-ತಿರುವುಗಳನ್ನು ನಿರ್ಬಂಧಿಸಲಾಗಿದೆ.

- ಬೆಂಗಳೂರು ನಗರದ ಕೇಂದ್ರ ಭಾಗದಲ್ಲಿನ ಹೆಚ್ಚು ಸಂಚಾರ ದಟ್ಟಣೆ ಇರುವ ಪ್ರವೇಶಗಳನ್ನು ಗುರುತಿಸಿ ರಸ್ತೆ ಅಗಲವಿದ್ದು, ಮುಕ್ತ ಎಡ ತಿರುವು ಅಥವಾ ಬಲ ತಿರುವು ಇರುವ ಕಡೆಗಳಲ್ಲಿ ಸಂಚಾರ ಪರಿಕರಗಳನ್ನು (Street Furniture) ಅಳವಡಿಸಿ ಪಥಶಿಸ್ತನ್ನು ಜಾರಿ ಮಾಡಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗಿರುತ್ತದೆ.

- ಪಿ.ಡಿ.ಎ ಉಪಕರಣಗಳನ್ನು ಎ.ಎಸ್.ಐ, ಪಿ.ಎಸ್.ಐ ಮತ್ತು ಪಿ.ಐ ಹಂತದವರೆಗಿನ ಅಧಿಕಾರಿಗಳಿಗೆ ಹಂಚಿಕೆ ಮಾಡಲಾಗಿದ್ದು, ಇದರ ಮೂಲಕ ಸಂಚಾರ ನಿಯಮಗಳನ್ನು ಉಲ್ಲಂಘಿಸುವ ಚಾಲಕರುಗಳ ವಿರುದ್ಧ ಸ್ಥಳದಲ್ಲೇ ಸಂಚಾರ ಪೊಲೀಸ್ ಅಧಿಕಾರಿಗಳು ಪ್ರಕರಣಗಳನ್ನು ದಾಖಲಿಸಿ ಸ್ಥಳದಂಡವನ್ನು ಪಾವತಿಸಿಕೊಳ್ಳುವ ವ್ಯವಸ್ಥೆಯು ಪರಿಣಾಮಕಾರಿಯಾಗಿದ್ದು, ಸುಗಮ ಸಂಚಾರಕ್ಕೆ ಸಹಕಾರಿಯಾಗಿದೆ.

- ಬೆಂಗಳೂರು ನಗರದ 107 ಪ್ರಮುಖ ರಸ್ತೆಗಳನ್ನು ಗುರುತಿಸಿ ಝೀರೋ ಟಾಲರೆನ್ಸ್ ರಸ್ತೆ ಎಂಬುದಾಗಿ ಜಾರಿ ಮಾಡಲಾಗಿರುತ್ತದೆ. ಅಂತಹ ರಸ್ತೆಗಳಲ್ಲಿ ಯಾವುದೇ ರೀತಿಯ ಅನಧಿಕೃತ ವಾಹನ ನಿಲುಗಡೆ, ತಪ್ಪು ವಾಹನ ನಿಲುಗಡೆ ಹಾಗೂ ಫುಟ್‌ಪಾತ್ ಮೇಲೆ ವಾಹನ ನಿಲುಗಡೆಗಳಾಗದಂತೆ ಸಂಚಾರ ಅಧಿಕಾರಿಗಳ ಗಸ್ತುಗಳನ್ನು ಏರ್ಪಡಿಸಲಾಗಿರುತ್ತದೆ.

- ಬೆಂಗಳೂರು ನಗರದ ರಸ್ತೆಗಳಲ್ಲಿ ಭಾರೀ ಸರಕು ಸಾಗಣೆ ವಾಹನಗಳಿಂದ ಸಂಚಾರ ಸಮಸ್ಯೆಗಳು ಕಂಡುಬಂದಿದ್ದ ಕಾರಣ ಬೆಂಗಳೂರು ನಗರದ ಪೊಲೀಸ್ ಆಯುಕ್ತರ ಸರಹದ್ದಿಗೆ ಒಳಪಡುವ ಎಲ್ಲಾ ರಸ್ತೆಗಳಲ್ಲಿಯೂ ಸರಕು ಸಾಗಣೆ ವಾಹನಗಳು ಬೆಳಿಗ್ಗೆ 11-00 ಗಂಟೆಯಿಂದ ಸಂಜೆ 04-00 ಗಂಟೆಯವರೆಗೆ ಹಾಗೂ ರಾತ್ರಿ 10-00 ಗಂಟೆಯಿಂದ ಬೆಳಿಗ್ಗೆ 07-00ಗಂಟೆಯವರೆಗೆ ಸಂಚರಿಸುವಂತೆ ಹಾಗೂ ಬೆಳಗ್ಗೆ 07-00 ಗಂಟೆಯಿಂದ 11-00 ಗಂಟೆಯವರೆಗೆ ಹಾಗೂ ಸಂಜೆ 04-00 ಗಂಟೆಯಿಂದ ರಾತ್ರಿ 10-00 ಗಂಟೆಯವರೆಗೆ ಪೊಲೀಸ್ ಆಯುಕ್ತರ ಸರಹದ್ದಿಗೆ ಒಳಪಡುವ ಎಲ್ಲಾ ರಸ್ತೆಗಳಲ್ಲಿಯೂ ಸರಕು ಸಾಗಣೆ ವಾಹನಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ

- ಪೀಕ್ ಅವರ್‌ಗಳಲ್ಲಿ ಬೆಂಗಳೂರು ನಗರದ ಎಲ್ಲಾ ಜಂಕ್ಷನ್ ಮತ್ತು ರಸ್ತೆಗಳಲ್ಲಿ ಸಂಚಾರ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯವರುಗಳು ಸಂಚಾರ ನಿರ್ವಹಣೆಯಲ್ಲಿ ತೊಡಗಿಕೊಂಡು ಸುಗಮ ವಾಹನ ಸಂಚಾರಕ್ಕೆ ಅನುವು ಮಾಡುತ್ತಿದ್ದಾರೆ.

- ಪ್ರತಿಯೊಂದು ಸಂಚಾರ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಒಂದೊಂದು ಪ್ರಮುಖ ರಸ್ತೆಗಳನ್ನು ಗುರುತಿಸಿ ಮಾದರಿ ರಸ್ತೆಯನ್ನಾಗಿ ಅಳವಡಿಸಿಕೊಳ್ಳಲಾಗಿದೆ ಹಾಗೂ ಇಂತಹ ಮಾದರಿ ರಸ್ತೆಗಳಲ್ಲಿ ಯಾವುದೇ ರೀತಿಯ ಸಂಚಾರ ಸಮಸ್ಯೆಗಳು ಸಂಭವಿಸದಂತೆ ಹಾಗೂ ರಸ್ತೆ ಸುರಕ್ಷತೆ ಕಟ್ಟುನಿಟ್ಟಾಗಿ ಜಾರಿ ಮಾಡಲಾಗಿದೆ.

- ಬೆಂಗಳೂರು ನಗರದಲ್ಲಿ ಅನಧಿಕೃತವಾಗಿ ನಿರ್ಮಿಸಲಾಗಿದ್ದ ರಸ್ತೆ ಉಬ್ಬರಗಳಿಂದ ಕಳೆದ ಹಲವು ವರ್ಷಗಳಲ್ಲಿ ಹಲವಾರು ದ್ವಿಚಕ್ರ ವಾಹನ ಸವಾರರು ಅದರಲ್ಲೂ ಪ್ರಮುಖವಾಗಿ ಇರುಳಿನ ಸಮಯದಲ್ಲಿ ಸ್ವಯಂ ಅಪಘಾತಕ್ಕೀಡಾಗಿ ಪ್ರಾಣ ಕಳೆದುಕೊಂಡಿರುತ್ತಾರೆ. ಇಂತಹ ಅಪಘಾತಗಳನ್ನು ತಡೆಯುವ ನಿಟ್ಟಿನಲ್ಲಿ ಬೆಂಗಳೂರು ನಗರ ಸಂಚಾರ ಪೊಲೀಸ್ ವಿಭಾಗವು ಬೆಂಗಳೂರು ನಗರದಾದ್ಯಂತ ಅವೈಜ್ಞಾನಿಕ ಹಾಗೂ ಅನಧಿಕೃತವಾಗಿ ನಿರ್ಮಿಸಲಾಗಿದ್ದ ರಸ್ತೆ ಉಬ್ಬರಗಳನ್ನು ತೆರವುಗೊಳಿಸಲಾಗಿದೆ. ಪ್ರಮುಖ ರಸ್ತೆಗಳಲ್ಲಿ ವಾಹನದ ವೇಗವನ್ನು ನಿಯಂತ್ರಿಸಿ ಅಪಘಾತಗಳನ್ನು ತಡೆಯುವ ಸಲುವಾಗಿ ಹಾಗೂ ಅವಶ್ಯಕವಿರುವ ಸ್ಥಳಗಳಲ್ಲಿ ಮಾತ್ರವೇ ಐ.ಆರ್.ಸಿ ಮಾದರಿಯಲ್ಲಿ ವೈಜ್ಞಾನಿಕವಾಗಿ ರಸ್ತೆ ಉಬ್ಬರಗಳನ್ನು ನಿರ್ಮಿಸಲಾಗಿದೆ.

- ಪ್ರತಿ ಸಂಚಾರ ಪೊಲೀಸ್ ಠಾಣಾ ಮಟ್ಟದಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರಗಳಂದು ನಾಗರೀಕ ಸಂಚಾರ ವೇದಿಕೆ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದ್ದು, ಆಯಾ ಸಂಚಾರ ಠಾಣಾ ವ್ಯಾಪ್ತಿಯ ನಾಗರಿಕರು ತಮ್ಮ ಸಂಚಾರ ಸಮಸ್ಯೆಗಳನ್ನು ಠಾಣಾ ಮಟ್ಟದಲ್ಲಿ ಪರಿಹರಿಸಿಕೊಳ್ಳುವ ವೇದಿಕೆಯನ್ನು ಸೃಜಿಸಲಾಗಿದೆ.

- ಬೆಂಗಳೂರು ನಗರದಲ್ಲಿ ಸಂಚಾರ ಸಮಸ್ಯೆಗಳನ್ನು ಪರಿಹರಿಸಲು ಹಾಗೂ ಸುಗಮ ಸಂಚಾರ ಜಾರಿ ಮಾಡಲು ಮತ್ತು ರಸ್ತೆಯಲ್ಲಿ ಸುರಕ್ಷತೆಯನ್ನು ಜಾರಿ ಮಾಡಲು ಹಲವಾರು ಕ್ರಮಗಳನ್ನು, ಆಂದೋಲನಗಳನ್ನು ಹಾಗೂ ವೃತ್ತಿಪರ

ಚಾಲಕರುಗಳಿಗೆ ಹಲವಾರು ತರಬೇತಿ ಹಾಗೂ ರಸ್ತೆ ಸುರಕ್ಷತೆಯ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಡೆಸುತ್ತಿದ್ದು, ರಸ್ತೆ ಸುರಕ್ಷತೆಯನ್ನು ಅತ್ಯುತ್ತಮ ರೀತಿಯಲ್ಲಿ ಜಾರಿ ಮಾಡಲಾಗಿದೆ.

- ಸಂಚಾರ ನಿಯಮಗಳನ್ನು ಉಲ್ಲಂಘಿಸುವ ಚಾಲಕರುಗಳ ವಿರುದ್ಧ ಸ್ಥಳದಲ್ಲೇ ಸಂಚಾರ ಪೊಲೀಸ್ ಅಧಿಕಾರಿಗಳು ಪ್ರಕರಣಗಳನ್ನು ದಾಖಲಿಸಿ ಸ್ಥಳದಂಡವನ್ನು ಪಾವತಿಸಿಕೊಳ್ಳುತ್ತಾರೆ. ಪೀಕ್ ಅವಧಿಗಳಲ್ಲಿ ಸಂಚಾರ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯವರುಗಳು ಸಂಚಾರ ನಿರ್ವಹಣೆಯಲ್ಲಿ ತೊಡಗಿಕೊಂಡಿರುವ ಕಾರಣ ಅಂತಹ ಸಂದರ್ಭದಲ್ಲಿ ಕಣ್ಗಾವಲು, ಎನ್‌ಫೋರ್ಸ್‌ಮೆಂಟ್ ಹಾಗೂ ಡಿಜಿಟಲ್ ಕ್ಯಾಮರಾಗಳ ಮೂಲಕ ಉಲ್ಲಂಘನೆ ಎಸಗುವ ವಾಹನಗಳ ಛಾಯಾಚಿತ್ರವನ್ನು ಸೆರೆಹಿಡಿದು ಅವರುಗಳ ವಿರುದ್ಧ ಐ.ಎಂ.ವಿ. 133 ನೋಟೀಸ್‌ಗಳನ್ನು ಕಳುಹಿಸಿ ದಂಡ ಪಾವತಿಸಿಕೊಳ್ಳಲಾಗುತ್ತಿದೆ.

- ನಗರದ ರಸ್ತೆಗಳಲ್ಲಿ ಸಂಚಾರ ಸಮಸ್ಯೆಗಳಿಗೆ ಪ್ರಮುಖ ಕಾರಣವಾಗಿರುವ ವಾಹನಗಳ ಅನಧಿಕೃತ, ತಪ್ಪು ನಿಲುಗಡೆ ಹಾಗೂ ಫುಟ್‌ಪಾತ್ ಮೇಲೆ ವಾಹನ ನಿಲುಗಡೆಗಳ ವಿರುದ್ಧ ಐ.ಎಂ.ವಿ. ಕಾಯ್ದೆಯಡಿಯಲ್ಲಿ ಪ್ರಕರಣಗಳನ್ನು ದಾಖಲು ಮಾಡುತ್ತಾ, ಕಠಿಣ ಕ್ರಮ ಕೈಗೊಳ್ಳಲಾಗುತ್ತಿರುತ್ತದೆ.

- ಬೆಂಗಳೂರು ನಗರದಾದ್ಯಂತ ಸಮಾನ ವೇಗಮಿತಿಯನ್ನು ಜಾರಿಗೊಳಿಸಲಾಗಿದ್ದು, ಅತಿ ವೇಗವಾಗಿ ಚಲಿಸುವವರ ವಿರುದ್ಧವೂ ಸಹ ಕಟ್ಟುನಿಟ್ಟಿನ ಕ್ರಮಗಳನ್ನು ಜರುಗಿಸಲಾಗಿದೆ. 2016ನೇ ಸಾಲಿನಲ್ಲಿ [illegible] ಪ್ರಕರಣಗಳನ್ನು ಹಾಗೂ 2017ನೇ ಸಾಲಿನಲ್ಲಿ 1,30,868 ಪ್ರಕರಣಗಳನ್ನು ಹಾಗೂ ಪ್ರಸಕ್ತ 2018ನೇ ಸಾಲಿನ ಜೂನ್ ಅಂತ್ಯದವರೆಗೆ ಒಟ್ಟು 46,126 ಪ್ರಕರಣಗಳನ್ನು ದಾಖಲಿಸಿ ದಂಡವನ್ನು ವಸೂಲಿ ಮಾಡಲಾಗಿದೆ.

- ಇದೇ ರೀತಿ ಅಡ್ಡಾ ದಿಡ್ಡಿಯಾಗಿ ವಾಹನ ಚಾಲನೆ ಮಾಡುವವರ ವಿರುದ್ಧ ಅಪಾಯಕಾರಿ ಚಾಲನೆ (Dangerous Driving) ಪ್ರಕರಣಗಳನ್ನು ದಾಖಲಿಸುತ್ತಿದೆ. 2016ನೇ ಸಾಲಿನಲ್ಲಿ 1,58,381 ಪ್ರಕರಣಗಳನ್ನು ಹಾಗೂ 2017ನೇ ಸಾಲಿನಲ್ಲಿ 1,51,726 ಹಾಗೂ ಪ್ರಸಕ್ತ 2018 ನೇ ಸಾಲಿನ ಜೂನ್ ಅಂತ್ಯದವರೆಗೆ ಒಟ್ಟು [illegible] ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ.

- ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವವರನ್ನು ಪತ್ತೆ ಮಾಡಲು ಅತ್ಯಾಧುನಿಕ ಆಲ್ಕೋಮೀಟರ್‌ಗಳನ್ನು ಖರೀದಿಸಲಾಗಿದ್ದು, ಅವುಗಳ ಮೂಲಕ ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುತ್ತಿರುವವರನ್ನು ಪತ್ತೆ ಮಾಡಲಾಗುತ್ತಿದೆ. ಬೆಂಗಳೂರು ನಗರ ಸಂಚಾರ ಪೊಲೀಸ್ ವಿಭಾಗವು ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವವರ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಂಡಿರುತ್ತದೆ. ಬೆಂಗಳೂರು ನಗರದ ರಸ್ತೆಗಳಲ್ಲಿ 2016ನೇ ಸಾಲಿನಲ್ಲಿ 59,028 ಪ್ರಕರಣಗಳನ್ನು, 2017ನೇ ಸಾಲಿನಲ್ಲಿ 73,741 ಹಾಗೂ ಪ್ರಸಕ್ತ 2018ನೇ ಸಾಲಿನ ಜೂನ್ ಅಂತ್ಯದವರೆಗೆ ಒಟ್ಟು 25,978 ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ.

- ಬೆಂಗಳೂರು ನಗರ ರಸ್ತೆಗಳಲ್ಲಿ ಪಥ ಶಿಸ್ತು ನಿಯಮಗಳನ್ನು ಉಲ್ಲಂಘಿಸುವ ವಾಹನ ಚಾಲಕರುಗಳಿಗೆ ಕಠಿಣ ನಿಯಮಗಳ ಜಾರಿಯ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. 2016ನೇ ಸಾಲಿನಲ್ಲಿ 3,97,618 ಪ್ರಕರಣಗಳನ್ನು ಹಾಗೂ 2017ನೇ ಸಾಲಿನಲ್ಲಿ 4,58,167 ಹಾಗೂ ಪ್ರಸಕ್ತ 2018ನೇ ಸಾಲಿನ ಜೂನ್ ಅಂತ್ಯದವರೆಗೆ ಒಟ್ಟು 2,23,869 ಪ್ರಕರಣಗಳನ್ನು ದಾಖಲಿಸಲಾಗಿದೆ.

- ಡ್ರಾಗ್ ರೇಸಿಂಗ್ ಮತ್ತು ವೀಲಿಂಗ್ ಮತ್ತು ಅಡ್ಡಾದಿಡ್ಡಿ ವಾಹನ ಚಾಲನೆ ಮಾಡುವುದನ್ನು ತಡೆಯಲು ಶಾಲಾ ಕಾಲೇಜು, ವಾಣಿಜ್ಯ ಮಳಿಗೆ ಹಾಗೂ ಪ್ರಮುಖ ಸ್ಥಳಗಳಲ್ಲಿ ಕೋಬ್ರಾ ಹಾಗೂ ಸಂಚಾರ ಪೊಲೀಸ್ ಗಸ್ತುಗಳನ್ನು ನಿಯೋಜಿಸಲಾಗಿದೆ. ವೀಲಿಂಗ್/ಡ್ರ್ಯಾಗ್ ರೇಸ್‌ನಲ್ಲಿ ತೊಡಗಿಸಿಕೊಂಡಿರುವವರ ಅಂತಹವರ ವಿರುದ್ಧ ಕಲಂ 184,188 ಹಾಗೂ 189 ಐ.ಎಂ.ವಿ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲಿಸಿ ವಾಹನವನ್ನು ಮತ್ತು ಚಾಲನಾ ಪರವಾನಿಗೆಯನ್ನು ವಶಪಡಿಸಿಕೊಂಡು ಪರವಾನಿಗೆಯನ್ನು ಅಮಾನತ್ತಿಗಾಗಿ ಸಂಬಂಧಪಟ್ಟ ಪ್ರಾದೇಶಿಕ ಸಾರಿಗೆ ಕಛೇರಿಗೆ ಕಳುಹಿಸಿಕೊಡಲಾಗುತ್ತಿರುತ್ತದೆ ಹಾಗೂ ವೀಲಿಂಗ್ ಮತ್ತು ಡ್ರಾಗ್ ರೇಸ್‌ನಲ್ಲಿ ತೊಡಗಿಸಿಕೊಂಡವರ ವಿರುದ್ಧ ಅಜಾಗರೂಕತೆ ಹಾಗೂ ನಿರ್ಲಕ್ಷ್ಯ ಚಾಲನೆಯಡಿ ಐಪಿಸಿ ಸೆಕ್ಷನ್ 279 ರಡಿಯಲ್ಲಿ ಕ್ರಿಮಿನಲ್ ಪ್ರಕರಣ ದಾಖಲಿಸಿ, ಕ್ರಮ ತೆಗೆದುಕೊಳ್ಳಲಾಗುತ್ತಿರುತ್ತದೆ.

- ಸಂಚಾರ ನಿರ್ವಹಣಾ ಕೇಂದ್ರವು (ಟಿಎಂಸಿ) ಆಧುನಿಕ ತಂತ್ರಜ್ಞಾನವನ್ನು ಬಳಸಿಕೊಂಡು ಬೆಂಗಳೂರು ನಗರದಾದ್ಯಂತ ಅಳವಡಿಸಲಾಗಿರುವ 179 ಕಣ್ಗಾವಲು ಕ್ಯಾಮರಾದ ಮೂಲಕ ಟಿಎಂಸಿಯಲ್ಲಿ ಅಳವಡಿಸಲಾಗಿರುವ ವಿಡಿಯೋವಾಲ್‌ನ ಮುಖಾಂತರ ಸಂಚಾರ ದಟ್ಟಣೆಯನ್ನು ನಿವಾರಿಸುವ ನಿಟ್ಟಿನಲ್ಲಿ ತೆಗೆದುಕೊಂಡ ಕ್ರಮದ ಪೈಕಿ 19 ಕಾರಿಡಾರ್‌ಗಳಲ್ಲಿ ಎರಡು ಪಾಳಿಯಲ್ಲಿ ನಿತ್ಯ ಕ್ಯಾಮರಾ ವೀಕ್ಷಿಸಿ ಜಂಕ್ಷನ್‌ಗಳಲ್ಲಿನ ಸಂಚಾರದ ದಟ್ಟಣೆಯನ್ನು ಪರಿಶೀಲಿಸಿ, ಸಿಗ್ನಲ್ ಲೈಟ್‌ನ

ಸಮಯವನ್ನು ಟಿಎಂಸಿಯಿಂದಲೇ ಬದಲಾವಣೆ ಮಾಡುವ ಮೂಲಕ ಸಂಚಾರದ ಒತ್ತಡವನ್ನು ಕಡಿಮೆ ಮಾಡಿ ಸುಗಮ ಸಂಚಾರ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ. ಬೆಂಗಳೂರು ನಗರ ಸಂಚಾರ ವಿಭಾಗದ ಪೊಲೀಸ್ ವೆಬ್‌ಸೈಟ್ ಅನ್ನು ಪ್ರತಿನಿತ್ಯ ಸಮಗ್ರ ಮಾಹಿತಿಗಳೊಂದಿಗೆ ಇಲ್ಲಿಯೇ ಅಪ್‌ಡೇಟ್ ಮಾಡಲಾಗುತ್ತಿರುತ್ತದೆ. ಹಾಗೂ ನಗರದಲ್ಲಿ ಅಳವಡಿಸಲಾಗಿರುವ ಸಿಗ್ನಲ್ ಲೈಟ್, ವಿ.ಎಂ.ಎಸ್, ಸರ್ವಿಲನ್ಸ್ ಕ್ಯಾಮರಾ ಇನ್ನಿತರೆ ತಾಂತ್ರಿಕ ಉಪಕರಣಗಳ ನಿಯಂತ್ರಣವನ್ನು ಮಾಡಬಹುದಲ್ಲದೆ, ಸಂದರ್ಭಕ್ಕೆ ತಕ್ಕಂತೆ ಮಾರ್ಪಾಡುಗಳನ್ನು ಮಾಡುವ ತಂತ್ರಜ್ಞಾನವನ್ನು ಒಳಗೊಂಡಿರುತ್ತದೆ.

- ಜಂಕ್ಷನ್‌ಗಳಲ್ಲಿ ಕಣ್ಗಾವಲು ಕ್ಯಾಮೆರಾಗಳನ್ನು ಹಾಗೂ ನಿಯಮ ಜಾರಿ ಕ್ಯಾಮೆರಾಗಳನ್ನು (Surveillance & Enforcement Camera) ಅಳವಡಿಸಿದ್ದು, ಜಂಕ್ಷನ್‌ಗಳಲ್ಲಿ ಜರುಗುವ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳನ್ನು ಸೆರೆಹಿಡಿದು ಮೋಟಾರು ವಾಹನ ಕಾಯ್ದೆ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿ, ಕ್ರಮ ಕೈಗೊಳ್ಳಲಾಗುತ್ತಿದೆ.
- 10 ಜಂಕ್ಷನ್‌ಗಳಲ್ಲಿ ಆರ್.ಎಲ್.ವಿ.ಡಿ (Red Light Violation Detection) ಕ್ಯಾಮೆರಾಗಳನ್ನು ಅಳವಡಿಸಲಾಗಿದ್ದು, ಸಿಗ್ನಲ್ ಜಂಪಿಂಗ್ ಮತ್ತು ಲೇನ್ ಡಿಸಿಪ್ಲಿನ್ ಉಲ್ಲಂಘನೆಗಳನ್ನು ಸ್ವಯಂಚಾಲಿತವಾಗಿ ಗುರ್ತಿಸುವ ಕ್ಷಮತೆಯನ್ನು ಹೊಂದಿರುವ ಸೌಲಭ್ಯವನ್ನು ಉಲ್ಲಂಘನೆ ಪ್ರಕರಣಗಳನ್ನು ದಾಖಲಿಸಲು ಬಳಸಿಕೊಳ್ಳಲಾಗುತ್ತಿದೆ.
- ಸಾರ್ವಜನಿಕರನ್ನು ಸಹ ಪರಿಣಾಮಕಾರಿಯಾಗಿ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳನ್ನು ದಾಖಲಿಸುವ ನಿಟ್ಟಿನಲ್ಲಿ ಬಳಸಿಕೊಳ್ಳಲಾಗುತ್ತಿದ್ದು ಪಬ್ಲಿಕ್ ಐ, ಐ ಚೇಂಜ್ ಮೈ ಸಿಟಿ ಆ್ಯಪ್‌ಗಳ ಜೊತೆಗೆ, ಫೇಸ್‌ಬುಕ್, ಜಿಮೇಲ್, Whats App ನಂತಹ ಸಾಮಾಜಿಕ ಜಾಲತಾಣವನ್ನು ಸಹ ಬಳಸಿಕೊಳ್ಳಲಾಗುತ್ತಿದೆ.
- ಪ್ರಾಯೋಗಿಕವಾಗಿ ನಗರದ 50 ಸಂಚಾರ ಪೊಲೀಸ್ ಅಧಿಕಾರಿಗಳಿಗೆ ಬಾಡಿ ವೋರ್ನ್ ಕ್ಯಾಮೆರಾಗಳನ್ನು ವಿತರಿಸಲಾಗಿದ್ದು, ಇದರಿಂದಾಗಿ ಪರಿಣಾಮಕಾರಿಯಾಗಿ ನಿಯಮ ಜಾರಿಗೊಳಿಸಲು ಸಾಧ್ಯವಾಗುತ್ತಿದೆ. ಜೊತೆಗೆ ಅಪಘಾತ ಪ್ರಕರಣಗಳ ತನಿಖೆಗೂ ಸಹ ಈ ಕ್ಯಾಮೆರಾಗಳನ್ನು ಬಳಸಬಹುದಾಗಿದೆ.
- ಸಂಚಾರ ವಿಭಾಗದಲ್ಲಿದ್ದ ಸಿಬ್ಬಂದಿ ಕೊರತೆಯನ್ನು ನೀಗಿಸುವ ನಿಟ್ಟಿನಲ್ಲಿ ಸರ್ಕಾರವು ಆದೇಶ ಸಂಖ್ಯೆ: ಹೆಚ್‌ಡಿ/247/ಪಿಓಪಿ/2016 ದಿನಾಂಕ: 27-10-2016 ರಲ್ಲಿ ಹೊಸದಾಗಿ 1577 ವಿವಿಧ ದರ್ಜೆಯ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳ ಮಂಜೂರಾತಿ ಬಲವನ್ನು ಹೆಚ್ಚಿಸಿರುತ್ತದೆ.
- ಬೆಂಗಳೂರು ನಗರ ಸಂಚಾರ ವಾರ್ಡನ್ ಸಂಸ್ಥೆ ಇದ್ದು, ಸಂಚಾರ ವಾರ್ಡನ್‌ಗಳನ್ನು ಸಹ ಸಂಚಾರ ನಿಯಂತ್ರಣಕ್ಕಾಗಿ ಬಳಸಿಕೊಳ್ಳಲಾಗುತ್ತಿದೆ.
- ಇತರೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ, ಸಾರ್ವಜನಿಕರಿಗೆ ಹಾಗೂ ಸುಗಮ ಸಂಚಾರಕ್ಕೆ ಅನುವಾಗುವಂತೆ ಕಾರ್ಯಯೋಜನೆ ರೂಪಿಸಿ ಪರಸ್ಪರ ಸಹಕಾರದಿಂದ ಯೋಜನೆಗಳೂ ಸಾಫಲ್ಯಗೊಳ್ಳುವಂತೆ ಕ್ರಮ ಕೈಗೊಳ್ಳಲಾಗಿದೆ.
- ಮೂಲಭೂತ ಸೌಕರ್ಯ ವಿಸ್ತರಣೆಗೆ ಅಗತ್ಯವಿದ್ದ ಕಡೆ ಸಂಚಾರ ಮಾರ್ಗ ಬದಲಾವಣೆ ಮಾಡಿ ವೈಟ್‌ಟಾಪಿಂಗ್ ಹಾಗೂ ಇತರೆ ಕಾಮಗಾರಿಗಳಿಗೆ ಅಗತ್ಯವಿರುವ ನೆರವನ್ನು ನೀಡಲಾಗುತ್ತಿದೆ.
- ಮೆಟ್ರೋ ಕಾಮಗಾರಿ ಕ್ಷಿಪ್ರವಾಗಿ ಪೂರ್ಣಗೊಳ್ಳಲು ಬೇಕಾದ ಎಲ್ಲಾ ರೀತಿಯ ಸಹಕಾರವನ್ನು ಬಿ.ಎಂ.ಆರ್.ಸಿ.ಎಲ್. ರವರಿಗೆ ನೀಡಲಾಗುತ್ತಿದೆ.
- ಬೆಂಗಳೂರು ನಗರದ ಥಣಿಸಂದ್ರದಲ್ಲಿರುವ ರಸ್ತೆ ತರಬೇತಿ ಮತ್ತು ಸುರಕ್ಷತಾ ಸಂಸ್ಥೆಯಲ್ಲಿ ಸಂಚಾರ ವಿಭಾಗದ ವಿವಿಧ ದರ್ಜೆಯ ಅಧಿಕಾರಿಗಳಿಗೆ ಮೂಲ ತರಬೇತಿ ಹಾಗೂ ಪುನ:ಶ್ಚೇತನ ತರಬೇತಿಯನ್ನು ನೀಡಲಾಗುತ್ತಿದೆ.
- ಬಿ-ಟ್ರ್ಯಾಕ್ ಯೋಜನೆಯಡಿಯಲ್ಲಿ ಸಂಚಾರ ವಿಭಾಗದ ಹಲವು ಕಡೆ ಜಂಕ್ಷನ್‌ಗಳ ಅಭಿವೃದ್ಧಿಯನ್ನು ಕೈಗೊಳ್ಳಲಾಗುತ್ತಿದೆ. ಈ ಕಾಮಗಾರಿಯಲ್ಲಿ ಸುಗಮ ಸಂಚಾರಕ್ಕೆ ಅಗತ್ಯವಿರುವ ಮಾರ್ಪಾಡುಗಳನ್ನು ವೈಜ್ಞಾನಿಕವಾಗಿ ನಿರ್ಮಿಸಲಾಗುತ್ತಿದೆ.
- ನಮ್ಮ-100(2) **"ನಿಮ್ಮ ದೂರು ನಮ್ಮ ಸೂರು"** ಯೋಜನೆಯಡಿಯಲ್ಲಿ ಬೆಂಗಳೂರು ನಗರದ ಪೊಲೀಸ್ ವ್ಯವಸ್ಥೆಯಲ್ಲಿ ಲಭ್ಯವಿರುವ ಎಲ್ಲಾ ಸೇವೆಗಳನ್ನು ಒಂದೇ ಸೂರಿನಡಿ ಕಲ್ಪಿಸಲಾಗಿದೆ. ಸಂಚಾರ ಸಂಬಂಧಿ ದೂರುಗಳನ್ನು ಸಾರ್ವಜನಿಕರು ನೇರವಾಗಿ 100ಕ್ಕೆ ಕರೆಮಾಡಿ ಪರಿಹಾರ ಕಂಡುಕೊಳ್ಳಬಹುದಾಗಿದೆ.
- ನಗರದ ಪ್ರಮುಖ ರಸ್ತೆಗಳಲ್ಲಿ ವಾಹನಗಳ ಅನಧಿಕೃತ ನಿಲುಗಡೆಯನ್ನು ಪರಿಣಾಮಕಾರಿಯಾಗಿ ತಡೆಯುವ ನಿಟ್ಟಿನಲ್ಲಿ ಲಭ್ಯವಿರುವ ಸರ್ಕಾರಿ ಟೋಯಿಂಗ್ ವಾಹನಗಳ ಜೊತೆಗೆ ಹೆಚ್ಚುವರಿ ಖಾಸಗಿ ಟೋಯಿಂಗ್ ವಾಹನಗಳನ್ನು ಬಳಸಿ ಕ್ರಮ ಕೈಗೊಳ್ಳಲಾಗುತ್ತಿದೆ.

## ಅನುಬಂಧ

- ಬೆಂಗಳೂರು ನಗರದಲ್ಲಿ ಇರುವ ರಸ್ತೆಗಳ ಮಿತಿಗಿಂತ ಹೆಚ್ಚು ವಾಹನಗಳು ಸಂಚರಿಸುತ್ತಿದ್ದು ವಾಹನ ದಟ್ಟಣೆಗೆ ಪ್ರಮುಖ ಕಾರಣವಾಗಿದ್ದು, ಇದನ್ನು ಸುಗಮಗೊಳಿಸಲು ಕೆಲವು ಪ್ರಮುಖ ರಸ್ತೆಗಳಲ್ಲಿ ಸಿಗ್ನಲ್ ಫ್ರೀ ಕಾರಿಡಾರ್‌ಗಳನ್ನು ಮಾಡಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆ.

- ಸಂಚಾರ ದಟ್ಟಣೆ/ ಸಮಸ್ಯೆಗಳು ಕಂಡುಬರುತ್ತಿರುವ ಸ್ಥಳಗಳಲ್ಲಿ ಪರಿವೀಕ್ಷಣೆ ನಡೆಸಿ ಸುಗಮ ಸಂಚಾರದ ಹಿತದೃಷ್ಟಿಯಿಂದ ನಗರದ ಹಲವಾರು ಸ್ಥಳಗಳಲ್ಲಿ ಬಲ ತಿರುವು ಹಾಗೂ ಯು-ತಿರುವುಗಳನ್ನು ನಿರ್ಬಂಧಿಸಲಾಗಿದೆ.

- ಬೆಂಗಳೂರು ನಗರದ ಕೇಂದ್ರ ಭಾಗದಲ್ಲಿನ ಹೆಚ್ಚು ಸಂಚಾರ ದಟ್ಟಣೆ ಇರುವ ಪ್ರದೇಶಗಳನ್ನು ಗುರುತಿಸಿ ರಸ್ತೆ ಅಗಲವಿದ್ದು, ಮುಕ್ತ ಎಡ ತಿರುವು ಅಥವಾ ಬಲ ತಿರುವು ಇರುವ ಕಡೆಗಳಲ್ಲಿ ಸಂಚಾರ ಪರಿಕರಗಳನ್ನು (Street Furniture) ಅಳವಡಿಸಿ ಪಥಶಿಸ್ತನ್ನು ಜಾರಿ ಮಾಡಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗಿರುತ್ತದೆ.

- ಪಿ.ಡಿ.ಎ ಉಪಕರಣಗಳನ್ನು ಎ.ಎಸ್.ಐ, ಪಿ.ಎಸ್.ಐ ಮತ್ತು ಪಿ.ಐ ಹಂತದವರೆಗಿನ ಅಧಿಕಾರಿಗಳಿಗೆ ಹಂಚಿಕೆ ಮಾಡಲಾಗಿದ್ದು, ಇದರ ಮೂಲಕ ಸಂಚಾರ ನಿಯಮಗಳನ್ನು ಉಲ್ಲಂಘಿಸುವ ಚಾಲಕರುಗಳ ವಿರುದ್ಧ ಸ್ಥಳದಲ್ಲೇ ಸಂಚಾರ ಪೊಲೀಸ್ ಅಧಿಕಾರಿಗಳು ಪ್ರಕರಣಗಳನ್ನು ದಾಖಲಿಸಿ ಸ್ಥಳದಂಡವನ್ನು ಪಾವತಿಸಿಕೊಳ್ಳುವ ವ್ಯವಸ್ಥೆಯು ಪರಿಣಾಮಕಾರಿಯಾಗಿದ್ದು, ಸುಗಮ ಸಂಚಾರಕ್ಕೆ ಸಹಕಾರಿಯಾಗಿದೆ.

- ಬೆಂಗಳೂರು ನಗರದ 107 ಪ್ರಮುಖ ರಸ್ತೆಗಳನ್ನು ಗುರುತಿಸಿ ಝೀರೋ ಟಾಲರೆನ್ಸ್ ರಸ್ತೆ ಎಂಬುದಾಗಿ ಜಾರಿ ಮಾಡಲಾಗಿರುತ್ತದೆ. ಅಂತಹ ರಸ್ತೆಗಳಲ್ಲಿ ಯಾವುದೇ ರೀತಿಯ ಅನಧಿಕೃತ ವಾಹನ ನಿಲುಗಡೆ, ತಪ್ಪು ವಾಹನ ನಿಲುಗಡೆ ಹಾಗೂ ಫುಟ್‌ಪಾತ್ ಮೇಲೆ ವಾಹನ ನಿಲುಗಡೆಗಳಾಗದಂತೆ ಸಂಚಾರ ಅಧಿಕಾರಿಗಳ ಗಸ್ತುಗಳನ್ನು ಏರ್ಪಡಿಸಲಾಗಿರುತ್ತದೆ.

- ಬೆಂಗಳೂರು ನಗರದ ರಸ್ತೆಗಳಲ್ಲಿ ಭಾರೀ ಸರಕು ಸಾಗಣೆ ವಾಹನಗಳಿಂದ ಸಂಚಾರ ಸಮಸ್ಯೆಗಳು ಕಂಡುಬಂದಿದ್ದ ಕಾರಣ ಬೆಂಗಳೂರು ನಗರದ ಪೊಲೀಸ್ ಆಯುಕ್ತರ ಸರಹದ್ದಿಗೆ ಒಳಪಡುವ ಎಲ್ಲಾ ರಸ್ತೆಗಳಲ್ಲಿಯೂ ಸರಕು ಸಾಗಣೆ ವಾಹನಗಳು ಬೆಳಿಗ್ಗೆ 11-00 ಗಂಟೆಯಿಂದ ಸಂಜೆ 04-00 ಗಂಟೆಯವರೆಗೆ ಹಾಗೂ ರಾತ್ರಿ 10-00 ಗಂಟೆಯಿಂದ ಬೆಳಿಗ್ಗೆ 07-00ಗಂಟೆಯವರೆಗೆ ಸಂಚರಿಸುವಂತೆ ಹಾಗೂ ಬೆಳಗ್ಗೆ 07-00 ಗಂಟೆಯಿಂದ 11-00 ಗಂಟೆಯವರೆಗೆ ಹಾಗೂ ಸಂಜೆ 04-00 ಗಂಟೆಯಿಂದ ರಾತ್ರಿ 10-00 ಗಂಟೆಯವರೆಗೆ ಪೊಲೀಸ್ ಆಯುಕ್ತರ ಸರಹದ್ದಿಗೆ ಒಳಪಡುವ ಎಲ್ಲಾ ರಸ್ತೆಗಳಲ್ಲಿಯೂ ಸರಕು ಸಾಗಣೆ ವಾಹನಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ

- ಪೀಕ್ ಅವರ್ಸ್‌ಗಳಲ್ಲಿ ಬೆಂಗಳೂರು ನಗರದ ಎಲ್ಲಾ ಜಂಕ್ಷನ್ ಮತ್ತು ರಸ್ತೆಗಳಲ್ಲಿ ಸಂಚಾರ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯವರುಗಳು ಸಂಚಾರ ನಿರ್ವಹಣೆಯಲ್ಲಿ ತೊಡಗಿಕೊಂಡು ಸುಗಮ ವಾಹನ ಸಂಚಾರಕ್ಕೆ ಅನುವು ಮಾಡುತ್ತಿದ್ದಾರೆ.

- ಪ್ರತಿಯೊಂದು ಸಂಚಾರ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಒಂದೊಂದು ಪ್ರಮುಖ ರಸ್ತೆಗಳನ್ನು ಗುರುತಿಸಿ ಮಾದರಿ ರಸ್ತೆಯನ್ನಾಗಿ ಅಳವಡಿಸಿಕೊಳ್ಳಲಾಗಿದೆ ಹಾಗೂ ಇಂತಹ ಮಾದರಿ ರಸ್ತೆಗಳಲ್ಲಿ ಯಾವುದೇ ರೀತಿಯ ಸಂಚಾರ ಸಮಸ್ಯೆಗಳು ಸಂಭವಿಸದಂತೆ ಹಾಗೂ ರಸ್ತೆ ಸುರಕ್ಷತೆ ಕಟ್ಟುನಿಟ್ಟಾಗಿ ಜಾರಿ ಮಾಡಲಾಗಿದೆ.

- ಬೆಂಗಳೂರು ನಗರದಲ್ಲಿ ಅನಧಿಕೃತವಾಗಿ ನಿರ್ಮಿಸಲಾಗಿದ್ದ ರಸ್ತೆ ಉಬ್ಬರಗಳಿಂದ ಕಳೆದ ಹಲವು ವರ್ಷಗಳಲ್ಲಿ ಹಲವಾರು ದ್ವಿಚಕ್ರ ವಾಹನ ಸವಾರರು ಅದರಲ್ಲೂ ಪ್ರಮುಖವಾಗಿ ಇರುಳಿನ ಸಮಯದಲ್ಲಿ ಸ್ವಯಂ ಅಪಘಾತಕ್ಕೀಡಾಗಿ ಪ್ರಾಣ ಕಳೆದುಕೊಂಡಿರುತ್ತಾರೆ. ಇಂತಹ ಅಪಘಾತಗಳನ್ನು ತಡೆಯುವ ನಿಟ್ಟಿನಲ್ಲಿ ಬೆಂಗಳೂರು ನಗರ ಸಂಚಾರ ಪೊಲೀಸ್ ವಿಭಾಗವು ಬೆಂಗಳೂರು ನಗರದಾದ್ಯಂತ ಅವೈಜ್ಞಾನಿಕ ಹಾಗೂ ಅನಧಿಕೃತವಾಗಿ ನಿರ್ಮಿಸಲಾಗಿದ್ದ ರಸ್ತೆ ಉಬ್ಬರಗಳನ್ನು ತೆರವುಗೊಳಿಸಲಾಗಿದೆ. ಪ್ರಮುಖ ರಸ್ತೆಗಳಲ್ಲಿ ವಾಹನದ ವೇಗವನ್ನು ನಿಯಂತ್ರಿಸಿ ಅಪಘಾತಗಳನ್ನು ತಡೆಯುವ ಸಲುವಾಗಿ ಹಾಗೂ ಅವಶ್ಯಕವಿರುವ ಸ್ಥಳಗಳಲ್ಲಿ ಮಾತ್ರವೇ ಐ.ಆರ್.ಸಿ ಮಾದರಿಯಲ್ಲಿ ವೈಜ್ಞಾನಿಕವಾಗಿ ರಸ್ತೆ ಉಬ್ಬರಗಳನ್ನು ನಿರ್ಮಿಸಲಾಗಿದೆ.

- ಪ್ರತಿ ಸಂಚಾರ ಪೊಲೀಸ್ ಠಾಣಾ ಮಟ್ಟದಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರಗಳಂದು ನಾಗರೀಕ ಸಂಚಾರ ವೇದಿಕೆ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದ್ದು, ಆಯಾ ಸಂಚಾರ ಠಾಣಾ ವ್ಯಾಪ್ತಿಯ ನಾಗರಿಕರು ತಮ್ಮ ಸಂಚಾರ ಸಮಸ್ಯೆಗಳನ್ನು ಠಾಣಾ ಮಟ್ಟದಲ್ಲಿ ಪರಿಹರಿಸಿಕೊಳ್ಳುವ ವೇದಿಕೆಯನ್ನು ಸೃಜಿಸಲಾಗಿದೆ.

- ಬೆಂಗಳೂರು ನಗರದಲ್ಲಿ ಸಂಚಾರ ಸಮಸ್ಯೆಗಳನ್ನು ಪರಿಹರಿಸಲು ಹಾಗೂ ಸುಗಮ ಸಂಚಾರ ಜಾರಿ ಮಾಡಲು ಮತ್ತು ರಸ್ತೆಯಲ್ಲಿ ಸುರಕ್ಷತೆಯನ್ನು ಜಾರಿ ಮಾಡಲು ಹಲವಾರು ಕ್ರಮಗಳನ್ನು, ಆಂದೋಲನಗಳನ್ನು ಹಾಗೂ ವೃತ್ತಿಪರ

ಚಾಲಕರುಗಳಿಗೆ ಹಲವಾರು ತರಬೇತಿ ಹಾಗೂ ರಸ್ತೆ ಸುರಕ್ಷತೆಯ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಡೆಸುತ್ತಿದ್ದು, ರಸ್ತೆ ಸುರಕ್ಷತೆಯನ್ನು ಅತ್ಯುತ್ತಮ ರೀತಿಯಲ್ಲಿ ಜಾರಿ ಮಾಡಲಾಗಿದೆ.

- ಸಂಚಾರ ನಿಯಮಗಳನ್ನು ಉಲ್ಲಂಘಿಸುವ ಚಾಲಕರುಗಳ ವಿರುದ್ಧ ಸ್ಥಳದಲ್ಲೇ ಸಂಚಾರ ಪೊಲೀಸ್ ಅಧಿಕಾರಿಗಳು ಪ್ರಕರಣಗಳನ್ನು ದಾಖಲಿಸಿ ಸ್ಥಳದಂಡವನ್ನು ಪಾವತಿಸಿಕೊಳ್ಳುತ್ತಾರೆ. ಪೀಕ್ ಅವರ್ಸ್‌ಗಳಲ್ಲಿ ಸಂಚಾರ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯವರುಗಳು ಸಂಚಾರ ನಿರ್ವಹಣೆಯಲ್ಲಿ ತೊಡಗಿಕೊಂಡಿರುವ ಕಾರಣ ಅಂತಹ ಸಂದರ್ಭದಲ್ಲಿ ಕಣ್ಗಾವಲು, ಎನ್‌ಫೋರ್ಸ್‌ಮೆಂಟ್ ಹಾಗೂ ಡಿಜಿಟಲ್ ಕ್ಯಾಮರಾಗಳ ಮೂಲಕ ಉಲ್ಲಂಘನೆ ಎಸಗುವ ವಾಹನಗಳ ಛಾಯಾಚಿತ್ರವನ್ನು ಸೆರೆಹಿಡಿದು ಅವರುಗಳ ವಿರುದ್ಧ ಐ.ಎಂ.ವಿ. 133 ನೋಟೀಸ್‌ಗಳನ್ನು ಕಳುಹಿಸಿ ದಂಡ ಪಾವತಿಸಿಕೊಳ್ಳಲಾಗುತ್ತಿದೆ.

- ನಗರದ ರಸ್ತೆಗಳಲ್ಲಿ ಸಂಚಾರ ಸಮಸ್ಯೆಗಳಿಗೆ ಪ್ರಮುಖ ಕಾರಣವಾಗಿರುವ ವಾಹನಗಳ ಅನಧಿಕೃತ, ತಪ್ಪು ನಿಲುಗಡೆ ಹಾಗೂ ಫುಟ್‌ಪಾತ್ ಮೇಲೆ ವಾಹನ ನಿಲುಗಡೆಗಳ ವಿರುದ್ಧ ಐ.ಎಂ.ವಿ. ಕಾಯ್ದೆಯಡಿಯಲ್ಲಿ ಪ್ರಕರಣಗಳನ್ನು ದಾಖಲು ಮಾಡುತ್ತಾ, ಕಠಿಣ ಕ್ರಮ ಕೈಗೊಳ್ಳಲಾಗುತ್ತಿರುತ್ತದೆ.

- ಬೆಂಗಳೂರು ನಗರದಾದ್ಯಂತ ಸಮಾನ ವೇಗಮಿತಿಯನ್ನು ಜಾರಿಗೊಳಿಸಲಾಗಿದ್ದು, ಅತಿ ವೇಗವಾಗಿ ಚಲಿಸುವವರ ವಿರುದ್ಧವೂ ಸಹ ಕಟ್ಟುನಿಟ್ಟಿನ ಕ್ರಮಗಳನ್ನು ಜರುಗಿಸಲಾಗಿದೆ. 2016ನೇ ಸಾಲಿನಲ್ಲಿ 1,09,769 ಪ್ರಕರಣಗಳನ್ನು ಹಾಗೂ 2017ನೇ ಸಾಲಿನಲ್ಲಿ 1,30,868 ಪ್ರಕರಣಗಳನ್ನು ಹಾಗೂ ಪ್ರಸಕ್ತ 2018ನೇ ಸಾಲಿನ ಜೂನ್ ಅಂತ್ಯದವರೆಗೆ ಒಟ್ಟು 46,126 ಪ್ರಕರಣಗಳನ್ನು ದಾಖಲಿಸಿ ದಂಡವನ್ನು ವಸೂಲಿ ಮಾಡಲಾಗಿದೆ.

- ಇದೇ ರೀತಿ ಅಡ್ಡಾ ದಿಡ್ಡಿಯಾಗಿ ವಾಹನ ಚಾಲನೆ ಮಾಡುವವರ ವಿರುದ್ಧ ಅಪಾಯಕಾರಿ ಚಾಲನೆ(Dangerous Driving) ಪ್ರಕರಣಗಳನ್ನು ದಾಖಲಿಸುತ್ತಿದೆ. 2016ನೇ ಸಾಲಿನಲ್ಲಿ 1,58,381 ಪ್ರಕರಣಗಳನ್ನು ಹಾಗೂ 2017ನೇ ಸಾಲಿನಲ್ಲಿ 1,51,726 ಹಾಗೂ ಪ್ರಸಕ್ತ 2018 ನೇ ಸಾಲಿನ ಜೂನ್ ಅಂತ್ಯದವರೆಗೆ ಒಟ್ಟು 52,457 ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ.

- ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವವರನ್ನು ಪತ್ತೆ ಮಾಡಲು ಅತ್ಯಾಧುನಿಕ ಅಲ್ಕೋಮೀಟರ್‌ಗಳನ್ನು ಖರೀದಿಸಲಾಗಿದ್ದು, ಅವುಗಳ ಮೂಲಕ ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುತ್ತಿರುವವರನ್ನು ಪತ್ತೆ ಮಾಡಲಾಗುತ್ತಿದೆ. ಬೆಂಗಳೂರು ನಗರ ಸಂಚಾರ ಪೊಲೀಸ್ ವಿಭಾಗವು ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವವರ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಂಡಿರುತ್ತದೆ. ಬೆಂಗಳೂರು ನಗರದ ರಸ್ತೆಗಳಲ್ಲಿ 2016ನೇ ಸಾಲಿನಲ್ಲಿ 59,028 ಪ್ರಕರಣಗಳನ್ನು, 2017ನೇ ಸಾಲಿನಲ್ಲಿ 73,741 ಹಾಗೂ ಪ್ರಸಕ್ತ 2018ನೇ ಸಾಲಿನ ಜೂನ್ ಅಂತ್ಯದವರೆಗೆ ಒಟ್ಟು 25,978 ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ.

- ಬೆಂಗಳೂರು ನಗರ ರಸ್ತೆಗಳಲ್ಲಿ ಪಥ ಶಿಸ್ತು ನಿಯಮಗಳನ್ನು ಉಲ್ಲಂಘಿಸುವ ವಾಹನ ಚಾಲಕರುಗಳಿಗೆ ಕಠಿಣ ನಿಯಮಗಳ ಜಾರಿಯ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. 2016ನೇ ಸಾಲಿನಲ್ಲಿ 3,97,618 ಪ್ರಕರಣಗಳನ್ನು ಹಾಗೂ 2017ನೇ ಸಾಲಿನಲ್ಲಿ 4,58,167 ಹಾಗೂ ಪ್ರಸಕ್ತ 2018ನೇ ಸಾಲಿನ ಜೂನ್ ಅಂತ್ಯದವರೆಗೆ ಒಟ್ಟು 2,23,869 ಪ್ರಕರಣಗಳನ್ನು ದಾಖಲಿಸಲಾಗಿದೆ.

- ಡ್ರಾಗ್ ರೇಸಿಂಗ್ ಮತ್ತು ವೀಲಿಂಗ್ ಮತ್ತು ಅಡ್ಡಾದಿಡ್ಡಿ ವಾಹನ ಚಾಲನೆ ಮಾಡುವುದನ್ನು ತಡೆಯಲು ಶಾಲಾ ಕಾಲೇಜು, ವಾಣಿಜ್ಯ ಮಳಿಗೆ ಹಾಗೂ ಪ್ರಮುಖ ಸ್ಥಳಗಳಲ್ಲಿ ಕೋಬ್ರಾ ಹಾಗೂ ಸಂಚಾರ ಪೊಲೀಸರ ಗಸ್ತುಗಳನ್ನು ಏರ್ಪಡಿಸಲಾಗಿದೆ. ವೀಲಿಂಗ್/ಡ್ರ್ಯಾಗ್ ರೇಸ್‌ನಲ್ಲಿ ತೊಡಗಿಸಿಕೊಂಡಿರುವವರ ಅಂತಹವರ ವಿರುದ್ಧ ಕಲಂ 184,188 ಹಾಗೂ 189 ಐ.ಎಂ.ವಿ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲಿಸಿ ವಾಹನವನ್ನು ಮತ್ತು ಚಾಲನಾ ಪರವಾನಿಗೆಯನ್ನು ವಶಪಡಿಸಿಕೊಂಡು ಪರವಾನಿಗೆಯನ್ನು ಅಮಾನತ್ತಿಗಾಗಿ ಸಂಬಂಧಪಟ್ಟ ಪ್ರಾದೇಶಿಕ ಸಾರಿಗೆ ಕಛೇರಿಗೆ ಕಳುಹಿಸಿಕೊಡಲಾಗುತ್ತಿರುತ್ತದೆ ಹಾಗೂ ವೀಲಿಂಗ್ ಮತ್ತು ಡ್ರಾಗ್ ರೇಸ್‌ನಲ್ಲಿ ತೊಡಗಿಸಿಕೊಂಡವರ ವಿರುದ್ಧ ಅಜಾಗರೂಕತೆ ಹಾಗೂ ನಿರ್ಲಕ್ಷ ಚಾಲನೆಯಡಿ ಐಪಿಸಿ ಸೆಕ್ಷನ್ 279 ರಡಿಯಲ್ಲಿ ಕ್ರಿಮಿನಲ್ ಪ್ರಕರಣ ದಾಖಲಿಸಿ, ಕ್ರಮ ತೆಗೆದುಕೊಳ್ಳಲಾಗುತ್ತಿರುತ್ತದೆ.

- ಸಂಚಾರ ನಿರ್ವಹಣಾ ಕೇಂದ್ರವು (ಟಿಎಂಸಿ) ಆಧುನಿಕ ತಂತ್ರಜ್ಞಾನವನ್ನು ಬಳಸಿಕೊಂಡು ಬೆಂಗಳೂರು ನಗರದಾದ್ಯಂತ ಅಳವಡಿಸಲಾಗಿರುವ 179 ಕಣ್ಗಾವಲು ಕ್ಯಾಮರಾದ ಮೂಲಕ ಟಿಎಂಸಿಯಲ್ಲಿ ಅಳವಡಿಸಲಾಗಿರುವ ವಿಡಿಯೋವಾಲ್‌ನ ಮುಖಾಂತರ ಸಂಚಾರ ದಟ್ಟಣೆಯನ್ನು ನಿವಾರಿಸುವ ನಿಟ್ಟಿನಲ್ಲಿ ತೆಗೆದುಕೊಂಡ ಮೊದಲ ಹೆಜ್ಜೆ. 19 ಕಾರಿಡಾರ್‌ಗಳಲ್ಲಿ ಎರಡು ಪಾಳಿಯಲ್ಲಿ ನಿತ್ಯ ಕ್ಯಾಮರಾ ವೀಕ್ಷಿಸಿ ಜಂಕ್ಷನ್‌ಗಳಲ್ಲಿನ ಸಂಚಾರದ ದಟ್ಟಣೆಯನ್ನು ಪರಿಶೀಲಿಸಿ, ಸಿಗ್ನಲ್ ಲೈಟ್‌ನ

ಸಮಯವನ್ನು ಟಿಎಂಸಿಯಿಂದಲೇ ಬದಲಾವಣೆ ಮಾಡುವ ಮೂಲಕ ಸಂಚಾರದ ಒತ್ತಡವನ್ನು ಕಡಿಮೆ ಮಾಡಿ ಸುಗಮ ಸಂಚಾರ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ. ಬೆಂಗಳೂರು ನಗರ ಸಂಚಾರ ವಿಭಾಗದ ಪೊಲೀಸ್ ವೆಬ್‌ಸೈಟ್ ಅನ್ನು ಪ್ರತಿನಿತ್ಯ ಸಮಗ್ರ ಮಾಹಿತಿಗಳೊಂದಿಗೆ ಇಲ್ಲಿಯೇ ಅಪ್‌ಡೇಟ್ ಮಾಡಲಾಗುತ್ತಿರುತ್ತದೆ. ಹಾಗೂ ನಗರದಲ್ಲಿ ಅಳವಡಿಸಲಾಗಿರುವ ಸಿಗ್ನಲ್ ಲೈಟ್, ವಿ.ಎಂ.ಎಸ್, ಸರ್ವಿಲನ್ಸ್ ಕ್ಯಾಮರಾ ಇನ್ನಿತರೆ ತಾಂತ್ರಿಕ ಉಪಕರಣಗಳ ನಿಯಂತ್ರಣವನ್ನು ಮಾಡಬಹುದಲ್ಲದೆ, ಸಂದರ್ಭಕ್ಕೆ ತಕ್ಕಂತೆ ಮಾರ್ಪಾಡುಗಳನ್ನು ಮಾಡುವ ತಂತ್ರಜ್ಞಾನವನ್ನು ಒಳಗೊಂಡಿರುತ್ತದೆ.

- ಜಂಕ್ಷನ್‌ಗಳಲ್ಲಿ ಕಣ್ಗಾವಲು ಕ್ಯಾಮೆರಾಗಳನ್ನು ಹಾಗೂ ನಿಯಮ ಜಾರಿ ಕ್ಯಾಮೆರಾಗಳನ್ನು (Surveillance & Enforcement Camera) ಅಳವಡಿಸಿದ್ದು, ಜಂಕ್ಷನ್‌ಗಳಲ್ಲಿ ಜರುಗುವ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳನ್ನು ಸೆರೆಹಿಡಿದು ಮೋಟಾರು ವಾಹನ ಕಾಯ್ದೆ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿ, ಕ್ರಮ ಕೈಗೊಳ್ಳಲಾಗುತ್ತಿದೆ.
- 10 ಜಂಕ್ಷನ್‌ಗಳಲ್ಲಿ ಆರ್.ಎಲ್.ವಿ.ಡಿ (Red Light Violation Detection) ಕ್ಯಾಮೆರಾಗಳನ್ನು ಅಳವಡಿಸಲಾಗಿದ್ದು, ಸಿಗ್ನಲ್ ಜಂಪಿಂಗ್ ಮತ್ತು ಲೇನ್ ಡಿಸಿಪ್ಲಿನ್ ಉಲ್ಲಂಘನೆಗಳನ್ನು ಸ್ವಯಂಚಾಲಿತವಾಗಿ ಗುರ್ತಿಸುವ ಕ್ಷಮತೆಯನ್ನು ಹೊಂದಿರುವ ಸೌಲಭ್ಯವನ್ನು ಉಲ್ಲಂಘನೆ ಪ್ರಕರಣಗಳನ್ನು ದಾಖಲಿಸಲು ಬಳಸಿಕೊಳ್ಳಲಾಗುತ್ತಿದೆ.
- ಸಾರ್ವಜನಿಕರನ್ನು ಸಹ ಪರಿಣಾಮಕಾರಿಯಾಗಿ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳನ್ನು ದಾಖಲಿಸುವ ನಿಟ್ಟಿನಲ್ಲಿ ಬಳಸಿಕೊಳ್ಳಲಾಗುತ್ತಿದ್ದು ಪಬ್ಲಿಕ್ ಐ, ಐ ಚೇಂಜ್ ಮೈ ಸಿಟಿ ಆ್ಯಪ್‌ಗಳ ಜೊತೆಗೆ, ಫೇಸ್‌ಬುಕ್, ಜಿಮೇಲ್, Whats App ನಂತಹ ಸಾಮಾಜಿಕ ಜಾಲತಾಣವನ್ನು ಸಹ ಬಳಸಿಕೊಳ್ಳಲಾಗುತ್ತಿದೆ.
- ಪ್ರಾಯೋಗಿಕವಾಗಿ ನಗರದ 50 ಸಂಚಾರ ಪೊಲೀಸ್ ಅಧಿಕಾರಿಗಳಿಗೆ ಬಾಡಿ ವೋರ್ನ್ ಕ್ಯಾಮೆರಾಗಳನ್ನು ವಿತರಿಸಲಾಗಿದ್ದು, ಇದರಿಂದಾಗಿ ಪರಿಣಾಮಕಾರಿಯಾಗಿ ನಿಯಮ ಜಾರಿಗೊಳಿಸಲು ಸಾಧ್ಯವಾಗುತ್ತಿದೆ. ಜೊತೆಗೆ ಅಪಘಾತ ಪ್ರಕರಣಗಳ ತನಿಖೆಗೂ ಸಹ ಈ ಕ್ಯಾಮೆರಾಗಳನ್ನು ಬಳಸಬಹುದಾಗಿದೆ.
- ಸಂಚಾರ ವಿಭಾಗದಲ್ಲಿದ್ದ ಸಿಬ್ಬಂದಿ ಕೊರತೆಯನ್ನು ನೀಗಿಸುವ ನಿಟ್ಟಿನಲ್ಲಿ ಸರ್ಕಾರವು ಆದೇಶ ಸಂಖ್ಯೆ: ಹೆಚ್‌ಡಿ/247/ಪಿಓಪಿ/2016 ದಿನಾಂಕ: 27-10-2016 ರಲ್ಲಿ ಹೊಸದಾಗಿ 1577 ವಿವಿಧ ದರ್ಜೆಯ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳ ಮಂಜೂರಾತಿ ಬಲವನ್ನು ಹೆಚ್ಚಿಸಿರುತ್ತದೆ.
- ಬೆಂಗಳೂರು ನಗರ ಸಂಚಾರ ವಾರ್ಡನ್ ಸಂಸ್ಥೆ ಇದ್ದು, ಸಂಚಾರ ವಾರ್ಡನ್‌ಗಳನ್ನು ಸಹ ಸಂಚಾರ ನಿಯಂತ್ರಣಕ್ಕಾಗಿ ಬಳಸಿಕೊಳ್ಳಲಾಗುತ್ತಿದೆ.
- ಇತರೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ, ಸಾರ್ವಜನಿಕರಿಗೆ ಹಾಗೂ ಸುಗಮ ಸಂಚಾರಕ್ಕೆ ಅನುವಾಗುವಂತೆ ಕಾರ್ಯಯೋಜನೆ ರೂಪಿಸಿ ಪರಸ್ಪರ ಸಹಕಾರದಿಂದ ಯೋಜನೆಗಳೂ ಸಾಫಲ್ಯಗೊಳ್ಳುವಂತೆ ಕ್ರಮ ಕೈಗೊಳ್ಳಲಾಗಿದೆ.
- ಮೂಲಭೂತ ಸೌಕರ್ಯ ವಿಸ್ತರಣೆಗೆ ಅಗತ್ಯವಿದ್ದ ಕಡೆ ಸಂಚಾರ ಮಾರ್ಗ ಬದಲಾವಣೆ ಮಾಡಿ ವೈಟ್‌ಟಾಪಿಂಗ್ ಹಾಗೂ ಇತರೆ ಕಾಮಗಾರಿಗಳಿಗೆ ಅಗತ್ಯವಿರುವ ನೆರವನ್ನು ನೀಡಲಾಗುತ್ತಿದೆ.
- ಮೆಟ್ರೋ ಕಾಮಗಾರಿ ಕ್ಷಿಪ್ರವಾಗಿ ಪೂರ್ಣಗೊಳ್ಳಲು ಬೇಕಾದ ಎಲ್ಲಾ ರೀತಿಯ ಸಹಕಾರವನ್ನು ಬಿ.ಎಂ.ಆರ್.ಸಿ.ಎಲ್. ರವರಿಗೆ ನೀಡಲಾಗುತ್ತಿದೆ.
- ಬೆಂಗಳೂರು ನಗರದ ಥಣಿಸಂದ್ರದಲ್ಲಿರುವ ರಸ್ತೆ ತರಬೇತಿ ಮತ್ತು ಸುರಕ್ಷತಾ ಸಂಸ್ಥೆಯಲ್ಲಿ ಸಂಚಾರ ವಿಭಾಗದ ವಿವಿಧ ದರ್ಜೆಯ ಅಧಿಕಾರಿಗಳಿಗೆ ಮೂಲ ತರಬೇತಿ ಹಾಗೂ ಪುನಃಶ್ಚೇತನ ತರಬೇತಿಯನ್ನು ನೀಡಲಾಗುತ್ತಿದೆ.
- ಬಿ-ಟ್ರ್ಯಾಕ್ ಯೋಜನೆಯಡಿಯಲ್ಲಿ ಸಂಚಾರ ವಿಭಾಗದ ಹಲವು ಕಡೆ ಜಂಕ್ಷನ್‌ಗಳ ಅಭಿವೃದ್ಧಿಯನ್ನು ಕೈಗೊಳ್ಳಲಾಗುತ್ತಿದೆ. ಈ ಕಾಮಗಾರಿಯಲ್ಲಿ ಸುಗಮ ಸಂಚಾರಕ್ಕೆ ಅಗತ್ಯವಿರುವ ಮಾರ್ಪಾಡುಗಳನ್ನು ವೈಜ್ಞಾನಿಕವಾಗಿ ನಿರ್ಮಿಸಲಾಗುತ್ತಿದೆ.
- ನಮ್ಮ-100(2) **"ನಿಮ್ಮ ದೂರು ನಮ್ಮ ನೂರು"** ಯೋಜನೆಯಡಿಯಲ್ಲಿ ಬೆಂಗಳೂರು ನಗರದ ಪೊಲೀಸ್ ವ್ಯವಸ್ಥೆಯಲ್ಲಿ ಲಭ್ಯವಿರುವ ಎಲ್ಲಾ ಸೇವೆಗಳನ್ನು ಒಂದೇ ಸೂರಿನಡಿ ಕಲ್ಪಿಸಲಾಗಿದೆ. ಸಂಚಾರ ಸಂಬಂಧಿ ದೂರುಗಳನ್ನು ಸಾರ್ವಜನಿಕರು ನೇರವಾಗಿ 100ಕ್ಕೆ ಕರೆಮಾಡಿ ಪರಿಹಾರ ಕಂಡುಕೊಳ್ಳಬಹುದಾಗಿದೆ.
- ನಗರದ ಪ್ರಮುಖ ರಸ್ತೆಗಳಲ್ಲಿ ವಾಹನಗಳ ಅನಧಿಕೃತ ನಿಲುಗಡೆಯನ್ನು ಪರಿಣಾಮಕಾರಿಯಾಗಿ ತಡೆಯುವ ನಿಟ್ಟಿನಲ್ಲಿ ಲಭ್ಯವಿರುವ ಸರ್ಕಾರಿ ಟೋಯಿಂಗ್ ವಾಹನಗಳ ಜೊತೆಗೆ ಹೆಚ್ಚುವರಿ ಖಾಸಗಿ ಟೋಯಿಂಗ್ ವಾಹನಗಳನ್ನು ಬಳಸಿ ಕ್ರಮ ಕೈಗೊಳ್ಳಲಾಗುತ್ತಿದೆ.